ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 22-03-2017

# ಪತ್ರಿಕಾ ಆಮಂತ್ರಣ

1. ಭಾರತ್ ಸ್ಕೌಟ್ಸ್ ಮತ್ತು ಗೈಡ್ ವತಿಯಿಂದ "ವಿಶ್ವ ಮಹಿಳಾ ದಿನಾಚರಣೆ"

ಸಾಮಾಜಿಕ ಬದಲಾವಣೆಗಾಗಿ ದಿಟ್ಟ ನಡಿಗೆ

ಕಾರ್ಯಕ್ರಮ – 1

ಉದ್ಘಾಟನೆ:

ಶ್ರೀಮತಿ ನಿರ್ಮಲಾ ಎಲಿಗಾರ್, ಸಹ ನಿರ್ದೇಶಕರು, ದೂರದರ್ಶನ, ಬೆಂಗಳೂರು.

ಸಾಮಾಜಿಕ ಬದಲಾವಣೆಗಾಗಿ ದಿಟ್ಟ ನಡಿಗೆ ಮುಕ್ತಾಯ:

ಶ್ರೀಮತಿ ಕೆ. ರತ್ನಪ್ರಭ, ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

ದಿನಾಂಕ: 23-03-2017 ಗುರುವಾರ ಸಮಯ: ಬೆಳಿಗ್ಗೆ 10.00 ಗಂಟೆಗೆ

ಕಾರ್ಯಕ್ರಮ – 2

ಮಹಿಳಾ ದಿನಾಚರಣೆ ಸಮಾರಂಭ

ಮುಖ್ಯ ಅತಿಥಿ:

ಶ್ರೀಮತಿ ಜಿ. ಪದ್ಮಾವತಿ, ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು

ಅಧ್ಯಕ್ಷತೆ

ಶ್ರೀಮತಿ ಸರೋಜ ವಿ. ನಾಯ್ಡು,

ಉಪಾಧ್ಯಕ್ಷರು, ಭಾರತ್ ಸ್ಕೌಟ್ಸ್ ಮತ್ತು ಗೈಡ್, ಕರ್ನಾಟಕ

ದಿನಾಂಕ: 23-03-2017 ಗುರುವಾರ ಸಮಯ: ಮಧ್ಯಾಹ್ನ 12.00 ಗಂಟೆಗೆ

ಸ್ಥಳ: ರಾಜ್ಯ ಕೇಂದ್ರ ಕಚೇರಿಯ "ಕೊಂಡಜ್ಜಿ ಬಸಪ್ಪ ಸಭಾಂಗಣ" ನಂ 39,
'ಶಾಂತಿ ಗೃಹ' ಮಹಾರಾಣಿ ಕಾಲೇಜು ಪಕ್ಕ, ಅರಮನೆ ರಸ್ತೆ, ಬೆಂಗಳೂರು.

2. ಕಲಾಸಂಕ್ರಾಂತಿ ಪುರಸ್ಕಾರ :
ಪ್ರಶಸ್ತಿ ಪ್ರದಾನ:
ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಿರಿಯ ನಾಗರೀಕರ ಸಬಲೀಕರಣ ಸಚಿವರು.
ಮುಖ್ಯ ಅತಿಥಿಗಳು:
ಕೆ. ಜೆ. ಜಾರ್ಜ್, ಬೆಂಗಳೂರು ಅಭಿವೃದ್ಧಿ ಸಚಿವರು,
ಶ್ರೀಮತಿ ಜಿ. ಪದ್ಮಾವತಿ, ಮಹಾಪೌರರು, ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು.
ಶ್ರೀಮತಿ ಶಕುಂತಲಾ ಶೆಟ್ಟಿ, ಸಂಸದೀಯ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು
ಜಯರಾಮರಾಜೇ ಅರಸ್, ಸದಸ್ಯರು, ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯ, ಬೆಂಗಳೂರು.
ದಿನಾಂಕ: 23-3-2017 ಗುರುವಾರ ಸಮಯ: ಸಂಜೆ 6-00 ಗಂಟೆಗೆ
ಸ್ಥಳ : ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

# ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಗೈಡ್ ವಿಭಾಗವು ಮಾರ್ಚ್ 23 ರಂದು ಬೆಳಿಗ್ಗೆ 10.00 ಗಂಟೆಗೆ ರಾಜ್ಯ ಕೇಂದ್ರ ಕಚೇರಿಯ "ಕೊಂಡಜ್ಜಿ ಬಸಪ್ಪ ಸಭಾಂಗಣ" ನಂ 39, 'ಶಾಂತಿಗೃಹ' ಅರಮನೆ ರಸ್ತೆ, ಬೆಂಗಳೂರು ಇಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಹಮ್ಮಿಕೊಂಡಿದೆ.

" ಸಾಮಾಜಿಕ ಬದಲಾವಣೆಗಾಗಿ ದಿಟ್ಟ ನಡಿಗೆ ' ಎಂಬ ಘೋಷ ವಾಕ್ಯದೊಂದಿಗೆ ಆಚರಿಸಲಾಗುತ್ತಿರುವ ವಿಶ್ವ ಮಹಿಳಾ ದಿನಾಚರಣೆಯ ಉದ್ಘಾಟನೆಯನ್ನು ಬೆಂಗಳೂರು ದೂರದರ್ಶನದ ಸಹ ನಿರ್ದೇಶಕರಾದ ಶ್ರೀಮತಿ ನಿರ್ಮಲಾ ಎಲಿಗಾರ ಅವರು ನೆರವೇರಿಸಲಿದ್ದಾರೆ.

ಸಾಮಾಜಿಕ ಬದಲಾವಣೆಗಾಗಿ ದಿಟ್ಟ ನಡಿಗೆಯ ಮುಕ್ತಾಯವನ್ನು ಅಪರ ಮುಖ್ಯ ಕಾರ್ಯದರ್ಶಿ ಶ್ರೀಮತಿ ಕೆ. ರತ್ನಪ್ರಭ ಅವರು ನೆರವೇರಿಸಲಿದ್ದಾರೆ.

ಅಂದು ಮಧ್ಯಾಹ್ನ 12.00 ಗಂಟೆಗೆ "ಮಹಿಳಾ ದಿನಾಚರಣೆ" ಸಮಾರಂಭದಲ್ಲಿ ಬೃಹತ್ ಬೆಂಗಳೂರು ಮಹಾನಗರಪಾಲಿಕೆ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಭಾರತ ಸ್ಕೌಟ್ಸ್ ಮತ್ತು ಗೈಡ್‌ನ ಉಪಾಧ್ಯಕ್ಷರಾದ ಶ್ರೀಮತಿ ಸರೋಜ ವಿ. ನಾಯ್ಡು ಅವರು ವಹಿಸಲಿದ್ದಾರೆ.

ಎಸ್‌ಎಂ.ಜೆಡಿ:ಜಿಪಿಆರ್.

## ವಾಣಿಜ್ಯ ಪರೀಕ್ಷೆ ಫಲಿತಾಂಶ ಪ್ರಕಟ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

2017 ರ ಜನವರಿ ಮಾಹೆಯಲ್ಲಿ ನಡೆದ ವಾಣಿಜ್ಯ ಪರೀಕ್ಷೆಯ ಫಲಿತಾಂಶವನ್ನು ಇಲಾಖಾ ವೆಬ್‌ಸೈಟ್ www.kseeb.kar.nic.in ನಲ್ಲಿ ಮಾರ್ಚ್ 23 ರಂದು ಬೆಳಿಗ್ಗೆ 11.00 ಗಂಟೆಗೆ ಪ್ರಕಟಿಸಲಾಗುವುದು.

ವಾಣಿಜ್ಯ ಸಂಸ್ಥೆಗಳಲ್ಲಿ ಮಾರ್ಚ್ 24 ರಂದು ಸಂಜೆ 4.00 ಗಂಟೆಗೆ ಫಲಿತಾಂಶವನ್ನು ಪ್ರಕಟಿಸಲು ಸಂಸ್ಥೆಯ ಮುಖ್ಯಸ್ಥರಿಗೆ ತಿಳಿಸಲಾಗಿದೆ ಎಂದು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಪ್ರಕಟಣೆ ತಿಳಿಸಿದೆ.

ಎಸ್‌ಎಂ.ಜೆಡಿ:ಜಿಪಿಆರ್.

## ವಿಧಾನ ಪರಿಷತ್ತಿನಲ್ಲಿ ಇಂದು:

# ರಾಜ್ಯಾದ್ಯಂತ 316 ಮೇವು ಬ್ಯಾಂಕ್ ಸ್ಥಾಪನೆ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ಮುಂದಿನ ದಿನಗಳಲ್ಲಿ ಮೇವಿನ ಕೊರತೆಯ್ನು ನೀಗಿಸಲು ಮೇವಿನ ಬೀಜದ ಮಿನಿಕಿಟ್‌ಗಳನ್ನು ರೈತರಿಗೆ ಉಚಿತವಾಗಿ ವಿತರಿಸಲು ಕಂದಾಯ ಇಲಾಖೆಯಿಂದ 10 ಕೋಟಿ ರೂ. ಗಳನ್ನು ಹಾಗೂ ಕೃಷಿ ಇಲಾಖೆಯಿಂದ 8 ಕೋಟಿ ರೂ. ಗಳನ್ನು ಬಿಡುಗಡೆಮಾಡಲಾಗಿದೆ. ಎಲ್ಲ ಮೇವಿನ ಅಭಾವ ತೀವ್ರವಾಗಿದ್ದಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವ ಮೂಲಕ ಮೇವು ಬೆಳೆಯಲು ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರು ತಿಳಿಸಿದರು.

ಅವರು ಇಂದು ವಿಧಾನ ಪರಿಷತ್ತಿನ ಕಲಾಪದಲ್ಲಿ ಪದವೀಧರರ ಕ್ಷೇತ್ರದ ನಿರಾಣಿ ಹನಮಂತ್ ರುದ್ರಪ್ಪ ಅವರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ, ರಾಜ್ಯದಲ್ಲಿ 316 ಮೇವು ಬ್ಯಾಂಕ್‌ಗಳನ್ನು ಸ್ಥಾಪಿಸಲಾಗಿದ್ದು, ಗೋಶಾಲೆಗಳಲ್ಲಿ ಜಾನುವಾರುಗಳಿಗೆ ನೆರಳು ಮತ್ತು ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ.

ಪ್ರಸ್ತುತ ರಾಜ್ಯದಲ್ಲಿ 53.42 ಲಕ್ಷ ಮೆಟ್ರಿಕ್ ಟನ್ ಮೇವು ದಾಸ್ತಾನು ಲಭ್ಯವಿದ್ದು, ಮುಂದಿನ 11 ವಾರಗಳಿಗೆ ಲಭ್ಯವಿದ್ದು, ಮೇವು ಬ್ಯಾಂಕ್‌ನಲ್ಲಿರುವ ಮೇವನ್ನು ರೈತರಿಗೆ ಕೆ.ಜಿ.ಗೆ 2 ರೂ ನಂತೆ, ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತಿದೆ.

ರಾಜ್ಯದಲ್ಲಿ ಮೇವು ಲಭ್ಯವಾಗದ ಸಂದರ್ಭದಲ್ಲಿ ಹೊರ ರಾಜ್ಯಗಳಿಂದಲೂ ಮೇವು ಖರೀದಿಸಲು ಪರಿಶೀಲಿಸಲಾಗುತ್ತಿದೆ ಎಂದ ಅವರು ರಾಜ್ಯಾದ್ಯಂತ 78 ಗೋಶಾಲೆಗಳನ್ನು ಸಹ ತೆರೆಯಲಾಗಿದೆ ಎಂದರು.

ಎಸ್‌ಎಂ.ಜೆಡಿ:ಜಿಪಿಆರ್.

# ನಿವೃತ್ತ ಭೂಮಾಪಕರ ಸೇವೆ ಪಡೆಯಲು ಸರ್ಕಾರದ ಚಿಂತನೆ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ಭೂಮಾಪನ ಇಲಾಖೆಯಲ್ಲಿ ಒಟ್ಟು 4,012 ಭೂಮಾಪಕರ ಹುದ್ದೆಗಳಿದ್ದು, ಈ ಪೈಕಿ 1,098 ಹುದ್ದೆಗಳು ಖಾಲಿಯಿರುವ ಕಾರಣಕ್ಕೆ ರೈತರ ತೊಂದರೆಯನ್ನು ತಪ್ಪಿಸಲು

ನಿವೃತ್ತ ಭೂಮಾಪಕರ ಸೇವೆಯನ್ನು ಗುತ್ತಿಗೆ ಆಧಾರದಲ್ಲಿ ಪಡೆಯಲು ಸರ್ಕಾರ ಚಿಂತನೆ ನಡೆಸಿದ ಎಂದು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಕಲಾಪದ ಸಂದರ್ಭದಲ್ಲಿ ಎಂ. ನಾರಾಯಣಸ್ವಾಮಿ ಅವರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ ಮಾತನಾಡಿದ ಸಚಿವರು 1067 ಭೂಮಾಪಕರ ಹುದ್ದೆಗಳನ್ನು ಭರ್ತಿಮಾಡಲು ಕಳೆದ ನವೆಂಬರ್‌ನಲ್ಲಿ ಅಧಿಸೂಚನೆ ಹೊರಡಿಸಲಾಗಿದ್ದು ಈ ಹಿನ್ನೆಲೆಯಲ್ಲಿ ಸರ್ದ್ಧಾತಕ ಸ್ಪರ್ಧೆ ನಡೆಸಿ ತ್ವರಿತ ಕ್ರಮ ಕೈಗೊಳ್ಳಲಾಗುವುದು.

400 ಮಂದಿ ಪರವಾನಗಿ ಭೂಮಾಪಕರನ್ನು ಇನ್ನೊಂದು ತಿಂಗಳೊಳಗಾಗಿ ನೇಮಕ ಮಾಡಿಕೊಳ್ಳಲಾಗುತ್ತಿದೆ. ಜುಲೈ 2017 ರೊಳಗಾಗಿ ಪುನ: 400 ಪರವಾನಿಗೆ ಭೂಮಾಪಕರನ್ನು ನೇಮಿಸಿಕೊಳ್ಳಲು ಸಿದ್ಧತೆ ನಡೆದಿದ್ದು, ಜೊತೆಗೆ ನಿವೃತ್ತ ಭೂಮಾಪಕರನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಕ್ರಮವಹಿಸಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಎಸ್‌ಎಂ.ಜಿಡಿ:ಜಿಪಿಆರ್.

## ರಾಜ್ಯದ 43 ತಾಲ್ಲೂಕುಗಳಲ್ಲಿ ಅಂತರ್ಜಲ ಮಟ್ಟ ಗಣನೀಯ ಕುಸಿತ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ರಾಜ್ಯದ 176 ತಾಲ್ಲೂಕುಗಳ ಪೈಕಿ 143 ತಾಲ್ಲೂಕುಗಳಲ್ಲಿ ಅಂತರ್ಜಲ ಸ್ಥಿರ ಮಟ್ಟದಲ್ಲಿ ಕುಸಿತ ಕಂಡಿದ್ದು ಅದರಲ್ಲಿ 43 ತಾಲ್ಲೂಕುಗಳಲ್ಲಿ ಗಣನೀಯ ಮಟ್ಟದಲ್ಲಿ ಕುಸಿತಗೊಂಡಿದೆ ಎಂದು ಸಣ್ಣ ನೀರಾವರಿ ಸಚಿವ ಟಿ.ಬಿ. ಜಯಚಂದ್ರ ಅವರು ಸದನಕ್ಕೆ ತಿಳಿಸಿದರು.

ಇಂದು ಸದನದಲ್ಲಿ ಬಸವರಾಜ ಹೊರಟ್ಟಿ ಅವರ ಪ್ರಶ್ನೆಗೆ ಉತ್ತರಿಸುತ್ತಾ ಮಾತನಾಡಿದ ಸಚಿವರು ಕರ್ನಾಟಕ ಅಂತರ್ಜಲ ಅಧಿನಿಯಮ 2011 ನಿಯಮಾವಳಿ 2012 ರನ್ವಯ 30 ಅತಿ ಬಳಕೆ ತಾಲ್ಲೂಕುಗಳಲ್ಲಿ ಯಾವುದೇ ಉದ್ದೇಶಕ್ಕಾಗಿ ಹೊಸ ಕೊಳವೆ ಬಾವಿ ಕೊರೆಯಲು ಕರ್ನಾಟಕ ಅಂತರ್ಜಲ ಪ್ರಾಧಿಕಾರದ ಅನುಮತಿ ಪಡೆಯುವುದು ಕಡ್ಡಾಯವಾಗಿದೆ.

ರಾಜ್ಯದಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಚೆಕ್‌ಡ್ಯಾಮ್‌ಗಳನ್ನು ನಿರ್ಮಾಣ ಮಾಡಲಾಗುತ್ತಿದ್ದು ಸಣ್ಣ ನೀರಾವರಿ ಇಲಾಖೆಯಿಂದ ಅಂತರ್ಜಲ ಕುಸಿಯುತ್ತಿರುವ ಜಿಲ್ಲೆಗಳಲ್ಲಿ ನೈಸರ್ಗಿಕ ನದಿ ಕೊಳಗಳಲ್ಲಿ ಅಡ್ಡಲಾಗಿ ಚೆಕ್‌ಡ್ಯಾಮ್, ಪಿಕ್‌ಅಪ್, ಬಾಂದಾರ ಮತ್ತು ಬ್ರಿಡ್ಜ್ ಕಂ ಬಾಂದಾರ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಎಸ್‌ಎಂ.ಜೆಡಿ:ಜಿಪಿಆರ್.

## ನೀಲಗಿರಿ ಮತ್ತು ಅಕೇಶಿಯಾ ಮರಗಳು ಅಂತರ್ಜಲ ಕುಸಿತಕ್ಕೆ ಕಾರಣ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಹೆಚ್ಚಾಗಿ ಬೆಳೆದಿರುವ ನೀಲಗಿರಿ ಮತ್ತು ಅಕೇಶಿಯಾ ಮರಗಳು ಅಂತರ್ಜಲ ಮಟ್ಟದ ಕುಸಿತಕ್ಕೆ ಕಾರಣವೆಂಬುದನ್ನು ಮನಗಂಡು ರಾಜ್ಯದಲ್ಲಿ ಈ ಮರಗಳನ್ನು ನೆಡುವುದನ್ನು ನಿಷೇಧಿಸಿ ರಾಜ್ಯ ಸರ್ಕಾರ ಅದೇಶ ಹೊರಡಿಸಿದೆ ಎಂದು ಅರಣ್ಯ ಸಚಿವ ಬಿ. ರಮನಾಥ ರೈ ಅವರು ತಿಳಿಸಿದರು.

ಇಂದು ಅವರು ಸದನದಲ್ಲಿ ರಾಮಚಂದ್ರ ಗೌಡ ಪ್ರಶ್ನೆಗೆ ಉತ್ತರಿಸುತ್ತಾ ಪ್ರಸ್ತುತ ಬಜೆಟ್‌ನಲ್ಲಿ ರಸ್ತೆ ಅಗಲೀಕರಣ ಕಾಮಗಾರಿಗಳ ಆಯವ್ಯಯದಲ್ಲಿ ಶೇ 1 ರಷ್ಟನ್ನು ಗಿಡಮರಗಳನ್ನು ಬೆಳೆಸಲು ಕಡ್ಡಾಯವಾಗಿ ಬಳಸಬೇಕೆಂದು ಸರ್ಕಾರ ಸುತ್ತೋಲೆ ಹೊರಡಿಸಿರುವುದು ಅತ್ಯುತ್ತಮ ಕ್ರಮವಾಗಿದೆ ಎಂದರು.

ಎಸ್‌ಎಂ.ಜೆಡಿ:ಜಿಪಿಆರ್.

## ದುಷ್ಪಾರಿಣಾಮ ಬೀರುವ ಮಾಧ್ಯಮಗಳ ಮೇಲೆ ನಿರ್ಭಂಧಕ್ಕೆ ಕ್ರಮ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ಇತ್ತೀಚೆಗೆ ಮಾಧ್ಯಮಗಳಲ್ಲಿ ಸಾರ್ವಜನಿಕರ ವೈಯಕ್ತಿಕ ಬದುಕು ಸಂಗತಿಗಳ ಬಗ್ಗೆ ಅತಿ ಹೆಚ್ಚಾಗಿ ಪ್ರಸಾರ ಮಾಡುತ್ತಿರುವುದು ಸಮಾಜದ ದುಷ್ಪಾರಿಣಾಮ

ಬೀರುತ್ತಿರುವುದನ್ನು ತಡೆಗಟ್ಟಲು ಮಾಧ್ಯಮಗಳ ಮೇಲೆ ಕ್ರಮ ಕೈಗೊಳ್ಳಲು ಮತ್ತಷ್ಟು ಚರ್ಚೆಯ ಅಗತ್ಯವಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ತಿಳಿಸಿದರು.

ಅವರು ಇಂದು ಸದನದ ವೇಳೆಯಲ್ಲಿ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ತಾರಾ ಅನೂರಾಧ ಅವರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ ಮುಖ್ಯಮಂತ್ರಿಗಳ ಪರವಾಗಿ ಮಾತನಾಡಿದ ಗೃಹ ಸಚಿವರು ಇತ್ತೀಚೆಗೆ ಮನರಂಜನೆ ವಾಹಿನಿಗಳು ಸೇರಿದಂತೆ ಸುದ್ದಿವಾಹಿನಿಗಳು ಸಹ ಮಕ್ಕಳು ಮತ್ತು ಮಹಿಳೆಯರ ಮೇಲೆ ದುಷ್ಪರಿಣಾಮ ಬೀರುವಂತಹ ಕಾರ್ಯಕ್ರಮಗಳನ್ನು ಪ್ರಸಾರ ಮಾಡುತ್ತಿರುವ ಕುರಿತು ಸಾರ್ವಜನಿಕರಿಂದ ದೂರುಗಳು ಬಂದಿವೆ. ಈ ಹಿನ್ನೆಲೆಯಲ್ಲಿ ಜೀ ಕನ್ನಡ ಟಿವಿಯಲ್ಲಿ ಪ್ರಸಾರವಾಗುವ ಅಂಜಲಿ, ಗಂಗಾ ಮತ್ತು ಸ್ಟಾರ್ ಸುವರ್ಣ ವಾಹಿನಿಯ ನೀಲಿ ಧಾರವಾಹಿಗಳಲ್ಲಿ ಮೂಢನಂಬಿಕೆ, ದೆವ್ವ, ವಿಧವೆ ಮುಂತಾಗಿ ಬಿಂಬಿಸುತ್ತಿರುವ ಕುರಿತು ವಾಹಿನಿಗಳಿಗೆ ನೋಟೀಸ್ ನೀಡಲಾಗಿದೆ. ಇದುವರೆಗೂ ಯಾವುದೇ ಉತ್ತರ ಬಂದಿಲ್ಲದ ಕಾರಣ ಅಂತಿಮ ತೀರ್ಮಾನ ಕೈಗೊಳ್ಳಲು ಮುಂದಿನ ಸಭೆಯ ಮೂಲಕ ಕೇಂದ್ರ ವಾರ್ತಾ ಮತ್ತು ಪ್ರಸಾರ ಮಂತ್ರಾಲಯಕ್ಕೆ ಶಿಫಾರಸ್ಸು ಮಾಡಲು ನಿರ್ಧರಿಸಲಾಗಿದೆ.

ದೂರುಗಳು ಸ್ಥಳೀಯ ಕೇಬಲ್ ವಾಹಿನಿಗಳಿಗೆ ಸಂಬಂಪಟ್ಟಿದ್ದು, ನಿಯಮಗಳ ಉಲ್ಲಂಘನೆ ದೃಢಪಟ್ಟಲ್ಲಿ ಇಂತಹ ಕೇಬಲ್ ಚಾನಲ್‌ಗಳ ವಿರುದ್ಧ ಕ್ರಮ ಕೈಗೊಳ್ಳಲು ಜಿಲ್ಲಾ ಸಮಿತಿಗೆ ಅಧಿಕಾರ ಇರುತ್ತದೆ.

ಒಟ್ಟಾರೆಯಾಗಿ ಕೇಬಲ್ ವಾಹಿನಿ ಮತ್ತು ಉಪಗ್ರಹ ವಾಹಿನಿಗಳ ಮೇಲೆ ಕ್ರಮ ಕೈಗೊಳ್ಳಲು ಸಮಿತಿ ಇರುವ ಹಿನ್ನೆಲೆಯಲ್ಲಿ ನಿರ್ದಿಷ್ಟ ವಾಹಿನಿಗಳ ನಿರ್ದಿಷ್ಟ ಕಾರ್ಯಕ್ರಮದ ಮೇಲೆ ದೂರುಗಳಿದ್ದರೆ ಸಮಿತಿಗೆ ದೂರು ಸಲ್ಲಿಸಬಹುದಾಗಿದೆ ಎಂದು ತಿಳಿಸಿದರು.

ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವ ಸಮಾಜದ ಮೇಲೆ ದುಷ್ಪರಿಣಾಮ ಬೀರುವ ಕಾರ್ಯಕ್ರಮಗಳ ವಿರುದ್ಧ ಪಕ್ಷಬೇಧ ಮರೆತು ಧ್ವನಿಗೂಡಿಸಿದ ಹಲವು ಸದಸ್ಯರು ಈ ವಿಷಯದ ಬಗ್ಗೆ ಹೆಚ್ಚಿನ ಬೆಳಕು ಚೆಲ್ಲಿ ಕೆಟ್ಟ ಕಾರ್ಯಕ್ರಮಗಳಿಗೆ ಕೊನೆ ಹಾಡಲು ರಾಜ್ಯ ಸರ್ಕಾರ ಕೈಗೊಳ್ಳಬೇಕಾದ ಅಂಶಗಳ ಬಗ್ಗೆ ತೀರ್ಮಾನಿಸಲು ಹೆಚ್ಚಿನ ಸಮಯಾವಕಾಶವನ್ನು ನೀಡಲು ಸಭಾಧ್ಯಕ್ಷರಿಗೆ ಮನವಿ ಮಾಡಿದರು.

ಎಸ್‌ಎಂ.ಜೆಡಿ:ಜಿಪಿಆರ್.

# ಕೃಷಿಕರಿಗೆ ಯಶಸ್ವಿನಿ ಯೋಜನೆಯಡಿ ಆರೋಗ್ಯ ಭಾಗ್ಯ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ರಾಜ್ಯದ ಎಲ್ಲಾ ಕೃಷಿಕರಿಗೆ ಮತ್ತು ಕೃಷಿ ಕಾರ್ಮಿಕರಿಗೆ ಯಶಸ್ವಿನಿ ಯೋಜನೆಯಡಿ ಆರೋಗ್ಯ ನೀಡಬೇಕೆಂಬುದು ಸರ್ಕಾರ ಉದ್ದೇಶವಾಗಿದೆ ಎಂದು ಆರೋಗ್ಯ ಸಚಿವ ಕೆ.ಆರ್. ರಮೇಶ್ ಕುಮಾರ್ ಅವರು ವಿಧಾನ ಪರಿಷತ್ತಿನಲ್ಲಿ ತಿಳಿಸಿದರು.

ವಿಧಾನ ಪರಿಷತ್ತಿನಲ್ಲಿ ಮಧ್ಯಾಹ್ನ ಬಜೆಟ್ ಮೇಲಿನ ಚರ್ಚೆಯಲ್ಲಿ ವಿರೋಧ ಪಕ್ಷದ ನಾಯಕ ಕೆ.ಎಸ್. ಈಶ್ವರಪ್ಪ ಅವರು ಯಶಸ್ವಿ ಯೋಜನೆಯಾಗಿರುವ ಯಶಸ್ವಿನಿ ಯೋಜನೆಯನ್ನು ಸಹಕಾರಿ ಕ್ಷೇತ್ರದಿಂದ ಆರೋಗ್ಯ ಇಲಾಖೆಗೆ ವರ್ಗಾವಣೆ ಮಾಡುವುದು ಸರಿಯಾದುದಲ್ಲವೆಂದು ತಿಳಿಸಿದ ಹಿನ್ನೆಲೆಯಲ್ಲಿ ಮಾತನಾಡಿದ ಸಚಿವರು, ಸಹಕಾರ ಸಂಘಗಳಲ್ಲಿ ಶೇ 6 ರಷ್ಟು ಮಾತ್ರ ರೈತರು ಸದಸ್ಯರಾಗಿದ್ದಾರೆ.

ಆದ್ದರಿಂದ ಯಾವುದೇ ಸಹಕಾರಿ ಸಂಘದಲ್ಲಿ ಸದಸ್ಯತ್ವ ಪಡೆಯದಿರುವ ಪ್ರೀಮಿಯಂ ಕಟ್ಟದಿರುವ ಎಲ್ಲಾ ರೈತರಿಗೆ ಮತ್ತು ಕಾರ್ಮಿಕರಿಗೆ ಆರೋಗ್ಯ ಸೇವೆ ದೊರಕಬೇಕು ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದರು.

ಯಶಸ್ವಿನಿ ಯೋಜನೆಯಡಿ ರೋಗಿಗಳಿಗೆ 2 ಲಕ್ಷದ ಒಳಗೆ ಸೀಮಿತವಾಗಿ ಆರೋಗ್ಯ ಸೇವೆಯನ್ನು ನೀಡಲಾಗುತ್ತಿದೆ. ಆದ್ದರಿಂದ ಈ ಮಿತಿಯನ್ನು ತೆಗೆದು ರೋಗಿ ಸಂಪೂರ್ಣವಾಗಿ ಗುಣಮುಖವಾಗುವ ತನಕ ತಗಲುವ ವೆಚ್ಚವನ್ನು ಭರಿಸಬೇಕೆಂದು ಸರ್ಕಾರದ ಉದ್ದೇಶವಾಗಿದೆ.

ಇದರಲ್ಲಿ ನಮ್ಮ ಸ್ವ ಪ್ರತಿಷ್ಠೆಯೇನು ಇರುವುದಿಲ್ಲ. ಈ ಕುರಿತು ಜಂಟಿ ಸದನ ಸದಸ್ಯರೊಂದಿಗೆ ಸಭೆಯನ್ನು ನಡೆಸಿ ತಮ್ಮ ಸಲಹೆ ಸೂಚನೆಗಳನ್ನು ತೆಗೆದುಕೊಂಡೇ ಮುಂದಿನ ಹೆಜ್ಜೆ ಇಡುವುದಾಗಿ ಸಚಿವರು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಎಲ್ಲಾ ತಾಲ್ಲೂಕುಗಳಲ್ಲಿ ವೆಂಟಿಲೇಟರ್ ಮತ್ತು ಐ.ಸಿ.ಯು. ಗಳನ್ನೊಳಗೊಂಡಂತೆ ತೀವ್ರ ನಿಗಾ ಘಟಕವನ್ನು ರಾಜ್ಯಾದ್ಯಂತ 200 ಜನರೀಕ್ ಔಷಧಿ ಕೇಂದ್ರ ಹಾಗೂ ಎಲ್ಲಾ ಜಿಲ್ಲೆಗಳಲ್ಲಿ ಬ್ಲೆಡ್ ಪ್ಲೇಟ್‌ಲೆಟ್ಸ್ ಕೇಂದ್ರಗಳನ್ನು ತೆರೆಯಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಎಸ್‌ಎಂ.ಜೆಡಿ:ಜಿಪಿಆರ್.

# 20 ದಶಲಕ್ಷ ಟನ್ ಎಂ. ಸ್ಯಾಂಡ್ ಉತ್ಪಾದನೆ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಪ್ರಸ್ತುತ 164 ಎಂ–ಸ್ಯಾಂಡ್ ತಯಾರಿಸುವ ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, ಅಂದಾಜು 20 ದಶಲಕ್ಷ ಟನ್ ಎಂ. ಸ್ಯಾಂಡ್ ಉತ್ಪಾದನೆಯಾಗುತ್ತಿದ್ದು, ಸಾರ್ವಜನಿಕರಿಗೆ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಪೂರೈಸಲಾಗುತ್ತಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಸಚಿವ ವಿನಯ ಕುಲಕರ್ಣಿ ಅವರು ತಿಳಿಸಿದರು.

ಅವರು ಇಂದು ವಿಧಾನಸಭೆಯಲ್ಲಿ ಅರಸೀಕೆರೆ ಶಾಸಕ ಶಿವಲಿಂಗೇಗೌಡ ಅವರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ. ಸರ್ಕಾರದ ಲೋಕೋಪಯೋಗಿ ಇಲಾಖೆಯಿಂದ ಗುತ್ತಿಗೆಯ ಒಟ್ಟು ಮೊತ್ತ ರೂ 10.00 ಕೋಟಿಗಿಂತ ಮೇಲ್ಪಟ್ಟಿರುವ ಎಲ್ಲಾ ಕಾಮಗಾರಿಗಳಲ್ಲಿ ಕಡ್ಡಾಯವಾಗಿ ಉತ್ಪಾದಿತ ಮರಳನ್ನು ಬಳಸಲು ತಿಳಿಸಲಾಗಿದೆ ಎಂದರು.

ಎಸ್‌ಎಂ.ಪಿಎಸ್‌ಐ:ಜಿಪಿಆರ್.

# ಭೂಸ್ವಾಧೀನಪಡಿಸಿಕೊಂಡಿರುವ ಜಮೀನುಗಳಲ್ಲಿ ಯಾವುದೇ ಜಮೀನು ಹಂಚಿಕೆಯಾಗಿಲ್ಲ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಭೂಸ್ವಾಧೀನಪಡಿಸಿಕೊಂಡಿರುವ ಜಮೀನುಗಳಲ್ಲಿ ಯಾವುದೇ ಜಮೀನು ಹಂಚಿಕೆಗೆ ಲಭ್ಯವಿರುವುದಿಲ್ಲ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಆರ್. ವಿ. ದೇಶಪಾಂಡೆ ಅವರು ತಿಳಿಸಿದರು.

ಇಂದು ವಿಧಾನಸಭೆಯ ಕಲಾಪ ಸಮಯದಲ್ಲಿ ಯಶವಂತಪುರ ಶಾಸಕ ಸೋಮಶೇಖರ್ ಎಸ್.ಟಿ. ಅವರ ಪ್ರಶ್ನೆಗೆ ಉತ್ತರಿಸುತ್ತ 1979 ಬೇ ಸಾಲಿನಲ್ಲಿ ಕುಂಬಳಗೂಡು 1 ನೇ ಹಂತಕ್ಕಾಗಿ 135-04 ಎಕರೆ ಹಾಗೂ 1982ನೇ ಸಾಲಿನಲ್ಲಿ ಕುಂಬಳಗೂಡು 2ನೇ ಹಂತಕ್ಕಾತಿ 86-66 ಎಕರೆ ಜಮೀನನ್ನು ಅಭಿವೃದ್ಧಿಪಡಿಸಿ, ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. **Critical Infrastructure Upgradation Scheme** ಯೋಜನೆಯಡಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಪುನ: ಅಭಿವೃದ್ಧಿಪಡಿರುವ ಕಾಮಗಾರಿಗಳನ್ನು ಮುಂಬರುವ ದಿನಗಳಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

ಎಸ್‍ಎಂ.ಪಿಎಸ್‍ಐ:ಜಿಪಿಆರ್.

## ರಾಜ್ಯದಲ್ಲಿ 398 ಬಿ.ಇಡಿ. ಕಾಲೇಜು

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

2016-17 ನೇ ಸಾಲಿನಲ್ಲಿ 9 ಸರ್ಕಾರಿ, 52 ಅನುದಾನಿತ, 337 ಖಾಸಗಿ ಕಾಲೇಜುಗಳು ಸೇರಿದಂತೆ ಒಟ್ಟಾರೆ 398 ಬಿ.ಇಡಿ. ಕಾಲೇಜುಗಳು ರಾಜ್ಯದಲ್ಲಿ ಅಸ್ತಿತ್ವದಲ್ಲಿದೆ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಅವರು ತಿಳಿಸಿದರು.

ಇಂದು ವಿಧಾನಸಭೆಯ ಕಲಾಪದಲ್ಲಿ ಶಾಂತಿನಗರ ಕ್ಷೇತ್ರ ಶಾಸಕ ಹ್ಯಾರಿಸ್ ಎನ್ ಎ. ಅವರ ಪ್ರಶ್ನೆಗೆ ಉತ್ತರಿಸುತ್ತಾ ಸರ್ಕಾರವು ಬಿ.ಇಡಿ. ಶಿಕ್ಷಣ ವ್ಯಾಸಂಗ ಕ್ರಮದಲ್ಲಿ ಮೌಲ್ಯವರ್ಧಿತ ಶಿಕ್ಷಣ ನೀಡುವ ಉದ್ದೇಶದಿಂದ ಎನ್.ಸಿ.ಟಿ.ಇ. ಮಾರ್ಗಸೂಚಿಗಳನ್ವಯ ಬಿ.ಇಡಿ. ಶಿಕ್ಷಣದ ವ್ಯಾಸಂಗದ ಅವಧಿಯನ್ನು ಒಂದು ವರ್ಷದಿಂದ ಎರಡು ವರ್ಷಗಳ ಅವಧಿಗೆ ನಿಗದಿಪಡಿಸಲಾಗಿದೆ ಎಂದರು.

ರಾಜ್ಯದ ಬಿ.ಇಡಿ. ಕಾಲೇಜುಗಳು 2017-18 ನೇ ಸಾಲಿನಿಂದ ಜಾರಿಗೆ ಬರುವಂತೆ ಏಕರೂಪ ವೇಳಾಪಟ್ಟಿಯನ್ನು ಅಳವಡಿಸಿಕೊಂಡು ವಿದ್ಯಾರ್ಥಿಗಳ ಶೈಕ್ಷಣಿಕ

ಚಟುವಟಿಕೆಗಳಿಗೆ ಯಾವುದೇ ಹಿನ್ನಡೆಯಾಗದಂತೆ ಕ್ರಮವಹಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.

ಎಸ್‌ಎಂ:ಪಿಎಸ್‌ಐ:ಜಿಪಿಆರ್.

## ಅಲ್ಪಸಂಖ್ಯಾತರಿಗೆ ಸೇರಿದ ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿಗೆ ಅವಕಾಶವಿಲ್ಲ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ಅಲ್ಪಸಂಖ್ಯಾತರಿಗೆ ಸೇರಿದ ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂದವರಿಗೆ ನೇಮಕಾತಿಗೆ ಸಂಬಂಧಿಸಿದಂತೆ ಮೀಸಲಾತಿ ನೀಡಲು ಅವಕಾಶವಿರುವುದಿಲ್ಲವೆಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಅವರು ತಿಳಿಸಿದರು.

ಅವರ ವಿಧಾನಸಭೆಯ ಕಲಾಪ ಸಂದರ್ಭದಲ್ಲಿ ಸದಸ್ಯ ಗೋವಿಂದ ಎಂ. ಕಾರಜೋಳ ಅವರ ಪ್ರಶ್ನೆಗೆ ಉತ್ತರಿಸುತ್ತಾ ಅಲ್ಪಸಂಖ್ಯಾತ ಅನುದಾನಿತ ಸಂಸ್ಥೆಯವರು ನಡೆಸುತ್ತಿರುವ ಕಾಲೇಜುಗಳಲ್ಲಿ ಒಟ್ಟು ಲಭ್ಯವಿರುವ ಪ್ರವೇಶಗಳಲ್ಲಿ ಶೇ 50 ಪ್ರವೇಶಗಳನ್ನು ತಮ್ಮದೇ ಆದ ಜನಾಂಗದ ಅಭ್ಯರ್ಥಿಗಳಿಗೆ ಹಂಚಿಕೆ ಮಾಡಬೇಕಾಗಿದ್ದು, ಇನ್ನುಳಿದ ಶೇಕಡ 50 ಪ್ರವೇಶಗಳನ್ನು **The Karnataka Educational Institutions (Classification, Regulation and Prescription of Curricula etc.,)** ರೋಸ್ಟರ್ ಪದ್ಧತಿಯಂತೆ ಮೆರಿಟ್ ಮೇಲೆ ಪ್ರವೇಶಗಳನ್ನು ಹಂಚುವಂತೆ ಕಾಲೇಜು ಶಿಕ್ಷಣ ಇಲಾಖೆಯ ಸುತ್ತೋಲೆಯಲ್ಲಿ ಸೂಚಿಸಲಾಗಿದೆ ಎಂದರು.

ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಲ್ಲಿ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ 20–06–1995 ರ ಸುತ್ತೋಲೆ ಪ್ರಕಾರ ಮೀಸಲಾತಿ ಅನ್ವಯಿಸುವುದಿಲ್ಲ ಎಂದರು.

ಎಸ್‌ಎಂ:ಪಿಎಸ್‌ಐ:ಜಿಪಿಆರ್.

# ಬಸವ ವಸತಿ ಯೋಜನೆಯಡಿ
# 3,73,810 ಮನೆ ಮಂಜೂರು

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಬಸವ ವಸತಿ ಯೋಜನೆಯಡಿ 3,73,810 ಮನೆಗಳನ್ನು ಮಂಜೂರು ಮಾಡಲಾಗಿದೆ ಎಂದು ವಸತಿ ಸಚಿವ ಎಂ. ಕೃಷ್ಣಪ್ಪ ಅವರು ತಿಳಿಸಿದರು.

ವಿಧಾನಸಭೆಯಲ್ಲಿ ಇಂದು ನಡೆದ ಕಲಾಪ ಸಂದರ್ಭದಲ್ಲಿ ಮಡಿಕೇರಿ ಶಾಸಕ ಅಪ್ಪಚ್ಚು ರಂಜನ್ ಎಂ. ಪಿ. ಅವರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ ಸಾಮಾಜಿಕ ಆರ್ಥಿಕ ಜಾತಿ ಜನಗಣತಿ 2011 ರ ಆಧಾರದ ಮೇಲೆ ಮನೆಗಳನ್ನು ಹಂಚಿಕೆ ಮಾಡಲಾಗುತ್ತಿದೆ. 2013–14 ನೇ ಸಾಲಿನಿಂದ ಇಲ್ಲಿಯವರೆಗೆ ಕೊಡಗು ಜಿಲ್ಲೆಗೆ 5,378 ಫಲಾನುಭವಿಗಳನ್ನು ಆಯ್ಕೆ ಮಾಡಿ ಮನೆಗಳನ್ನು ಮಂಜೂರು ಮಾಡಲಾಗಿದ್ದು, ಇದರಲ್ಲಿ ಒಟ್ಟು 2,418 ಮನೆಗಳು ಪೂರ್ಣಗೊಂಡಿದ್ದು, 1,365 ಮನೆಗಳ ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಉಳಿದಂತೆ 1,595 ಮನೆಗಳು ಪ್ರಾರಂಭವಾಗಬೇಕಿದೆ. ಇದಲ್ಲದೆ 2016–17 ನೇ ಸಾಲಿಗೆ ಹೆಚ್ಚುವರಿಯಾಗಿ 450 ಮನೆಗಳ ಗುರಿಯನ್ನು ಬಸವ ವಸತಿ ಯೋಜನೆಯಡಿ ಮಂಜೂರು ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

ಎಸ್‌ಎಂ:ಪಿಎಸ್‌ಐ:ಜಿಪಿಆರ್.

# ಎನ್‌ಓಎಫ್‌ಎನ್ ಯೋಜನೆಯಡಿ ಇಂಟರ್‌ನೆಟ್ ಸಂಪರ್ಕ

ಬೆಂಗಳೂರು, ಮಾರ್ಚ್ 22, (ಕರ್ನಾಟಕ ವಾರ್ತೆ)

ರಾಜ್ಯದ ಒಟ್ಟು 6022 ಗ್ರಾಮ ಪಂಚಾಯಿತಿಗಳಲ್ಲಿ 4737 ಗ್ರಾಮ ಪಂಚಾಯಿತಿಗಳಿಗೆ ಎನ್‌ಓಎಫ್‌ಎನ್ ಯೋಜನೆಯಡಿ ಇಂಟರ್‌ನೆಟ್ ಸಂಪರ್ಕ ಕಲ್ಪಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಎಚ್.ಕೆ. ಪಾಟೀಲ ಅವರು ತಿಳಿಸಿದರು.

ಅವರು ಇಂದು ವಿಧಾನಸಭೆಯ ಕಲಾಪ ಸಂದರ್ಭದಲ್ಲಿ ಸೊರಬ ಕ್ಷೇತ್ರದ ಶಾಸಕ ಮಧು ಬಂಗಾರಪ್ಪ ಎಸ್ ಅವರ ಪ್ರಶ್ನೆಗೆ ಉತ್ತರಿಸುತ್ತಾ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಇಂಟರ್‌ನೆಟ್ ಸೌಲಭ್ಯ ಒದಗಿಸಲು ಈಗಾಗಲೇ ಎನ್‌ಒಎಫ್‌ಎನ್ ಯೋಜನೆಯಡಿ 4737 ಗ್ರಾಮ ಪಂಚಾಯಿತಿಗಳಿಗೆ ಬಿಎಸ್‌ಎನ್‌ಎಲ್ ಸಂಪರ್ಕ ಕಲ್ಪಿಸಲಾಗಿದೆ. ಉಳಿದ 824 ಗ್ರಾಮ ಪಂಚಾಯಿತಿಗಳಿಗೆ ಮಾರ್ಚ್ 31 ರೊಳಗೆ ಹಾಗೂ 461 ಹೊಸ ಗ್ರಾಮ ಪಂಚಾಯಿತಿಗಳಿಗೆ 2017 ನೇ ಸಾಲಿನ ಜೂನ್ 30 ರೊಳಗೆ ಇಂಟರ್‌ನೆಟ್ ಸೌಲಭ್ಯ ಒದಗಿಸುವಂತೆ ಮಾರ್ಚ್ 10 ರಂದು ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಬಿಎಸ್‌ಎನ್‌ಎಲ್ ಸಂಸ್ಥೆಯವರಿಗೆ ತಿಳಿಸಿರುತ್ತಾರೆ ಎಂದರು.

ಎಸ್‌ಎಂ:ಪಿಎಸ್‌ಐ:ಜಿಪಿಆರ್.

## ನೀರಿನ ಮಿತ ಬಳಕೆಗೆ ಆದ್ಯತೆ ನೀಡಿ : ಸಿದ್ದರಾಮಯ್ಯ

ಬೆಂಗಳೂರು, ಮಾರ್ಚ್ 22 (ಕರ್ನಾಟಕ ವಾರ್ತೆ) :

ನೀರಿನ ಮಿತ ಬಳಕೆಗೆ ಆದ್ಯತೆ ನೀಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ಜನತೆಗೆ ಇಲ್ಲಿ ಇಂದು ಕರೆ ನೀಡಿದರು.

ವಿಶ್ವ ಜಲ ದಿನಾಚರಣೆಯ ಅಂಗವಾಗಿ ವಿಧಾನಸೌಧದ ವೈಭವೋಪೇತ ಮೆಟ್ಟಿಲುಗಳ ಮುಂಭಾಗದಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಆಯೋಜಿಸಿದ್ದ *ನೀರು ಉಳಿಸಿ ಬೆಂಗಳೂರು ಉಳಿಸಿ* ಜಾಗೃತಿ ಜಾಥಾ ಅಭಿಯಾನವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ನೀರು ಭೂಮಿಯ ಮೇಲೆ ವಾಸಿಸುವ ಮನುಷ್ಯರು, ಪ್ರಾಣಿಗಳು, ಪಕ್ಷಿಗಳು, ಗಿಡ-ಮರಗಳು ಒಳಗೊಂಡಂತೆ ಎಲ್ಲಾ ಜೀವರಾಶಿಗಳಿಗೆ ಅತ್ಯಾವಶ್ಯಕವಾದುದು. ಬದುಕಿಗೆ ನೀರು ಅತ್ಯಂತ ಅವಶ್ಯಕ. ನೀರು ಕೇವಲ ಕುಡಿಯಲು ಮಾತ್ರವಲ್ಲ, ವ್ಯವಸಾಯ ಹಾಗೂ ಇನ್ನಿತರ ಉಪಯೋಗಕ್ಕೂ ಬರುತ್ತದೆ. ಆದ್ದರಿಂದ ಅತ್ಯಮೂಲ್ಯ ನೀರಿನ ಮಿತ ಬಳಕೆಗೆ ಎಲ್ಲರೂ ಮುಂದಾಗಬೇಕು ಎಂದರು.

ನಾವು ಬಳಸುವ ನೀರಿನಲ್ಲಿ ವ್ಯರ್ಥವಾಗುವುದೇ ಹೆಚ್ಚು. ಶೇಕಡಾ 80 ರಷ್ಟು ನೀರು ವ್ಯರ್ಥವಾಗುತ್ತದೆ. ಆಸ್ಟ್ರೇಲಿಯಾ, ಇಸ್ರೇಲ್ ಹಾಗೂ ಸಿಂಗಾಪುರ ದೇಶಗಳಲ್ಲಿ ತ್ಯಾಜ್ಯ ನೀರನ್ನು ಸಂಸ್ಕರಿಸಿ ಪುನರ್ ಬಳಕೆ ಮಾಡಲಾಗುತ್ತಿದೆ. ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಪ್ರತಿನಿತ್ಯ 1200 ದಶಲಕ್ಷ ಲೀಟರ್‌ನಿಂದ 1300 ದಶಲಕ್ಷ ಲೀಟರ್‌ನಷ್ಟು ತ್ಯಾಜ್ಯ ನೀರು ಉತ್ಪತ್ತಿಯಾಗುತ್ತದೆ. ಇದರ ಮರು ಬಳಕೆಗೆ ಬೆಂಗಳೂರು ಜಲ ಮಂಡಳಿ ಹಾಗೂ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರಯತ್ನ ನಡೆಸಿವೆ. ಈ ನೀರನ್ನು ಕುಡಿಯುವ ನೀರಿಗೆ ಬಳಸದೆ ಇತರ ಉದ್ದೇಶಕ್ಕೆ ಬಳಸಿದರೆ ಕುಡಿಯುವ ನೀರನ್ನು ಉಳಿಸಬಹುದಾಗಿದೆ ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ ಈ ವರ್ಷ ಭೀಕರ ಬರಗಾಲವಿದೆ. ಕುಡಿಯುವ ನೀರಿಗೆ ತೀವ್ರ ಕೊರತೆ ಇದೆ. ಕಾವೇರಿ ಪಾತ್ರದ ಕಾವೇರಿ, ಕಬಿನಿ ಹಾಗೂ ಹೇಮಾವತಿ ನದಿಗಳಲ್ಲೂ ಅಗತ್ಯ ಪ್ರಮಾಣದಲ್ಲಿ ನೀರಿಲ್ಲ. ಇದರಿಂದ ಬೆಂಗಳೂರು, ಮೈಸೂರು, ಮಂಡ್ಯ ಹಾಗೂ ಹಾಸನ ಜಿಲ್ಲೆಗಳಿಗೆ ಕುಡಿಯುವ ನೀರಿನ ಕೊರತೆ ಉದ್ಭವಿಸಿದೆ. ಇಂತಹ ಪರಿಸ್ಥಿತಿಯಲ್ಲಿ ಭಾರತದ ಸರ್ವೋಚ್ಛ ನ್ಯಾಯಾಲಯವು ತಮಿಳುನಾಡಿಗೆ ಕಾವೇರಿ ನದಿಯಿಂದ ಪ್ರತಿದಿನ 2000 ಕ್ಯೂಸೆಕ್ಸ್ ನೀರು ಬಿಡುವಂತೆ ರಾಜ್ಯಕ್ಕೆ ಸೂಚಿಸಿದೆ. ಆದಕಾರಣ, ನೀರಿನ ಮಹತ್ವವನ್ನು ಅರಿತು ನೀರನ್ನು ಅಪವ್ಯಯ ಮಾಡದೆ ಅಗತ್ಯಕ್ಕೆ ತಕ್ಕಂತೆ ಮಾತ್ರ ಬಳಸುವ ಪರಿಪಾಠವನ್ನು ನಾವು ರೂಢಿಸಿಕೊಳ್ಳಬೇಕು ಎಂದು ಸಿದ್ದರಾಮಯ್ಯ ಅವರು ರಾಜ್ಯದ ಜನತೆಯಲ್ಲಿ ಮನವಿ ಮಾಡಿದರು.

ವಿಶ್ವ ಜಲ ದಿನದ ಅಂಗವಾಗಿ ಮುಖ್ಯಮಂತ್ರಿಯವರು ಅಲ್ಲಿ ನೆರೆದಿದ್ದ ಅಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ನೀರಿನ ಮರು ಬಳಕೆ ಕುರಿತಂತೆ ಪ್ರತಿಜ್ಞಾವಿಧಿ ಬೋಧಿಸಿದರು. ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮಹೇಂದ್ರ ಜೈನ್, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯೂ ಆದ ಬೆಂಗಳೂರು ಜಲ ಮಂಡಳಿಯ ಅಧ್ಯಕ್ಷ ತುಷಾರ್ ಗಿರಿನಾಥ್ ಅವರೂ ಸೇರಿದಂತೆ ಹಿರಿಯ ಅಧಿಕಾರಿಗಳು ಈ ಸಮಾರಂಭದಲ್ಲಿ ಉಪಸ್ಥಿತರಿದ್ದರು.

***********

ಡಿ ಪಿ ಎಂ : ಟಿ ಸಿ ಎಂ ಬಿ

## ಮುಖ್ಯಮಂತ್ರಿ ಅವರಿಂದ ಜನಪರ ಬಜೆಟ್ ವಸ್ತು ಪ್ರದರ್ಶನ ಉದ್ಘಾಟನೆ

**ಬೆಂಗಳೂರು, ಮಾರ್ಚ್ 22 (ಕರ್ನಾಟಕ ವಾರ್ತೆ) :**

ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ವಿಧಾನಸೌಧದ ಔತಣ ಸಭಾಂಗಣದಲ್ಲಿ ಏರ್ಪಡಿಸಿದ್ದ ಜನಪರ ಬಜೆಟ್ 2017-18 ರ ವಸ್ತು ಪ್ರದರ್ಶನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರುಇಲ್ಲಿ ಇಂದು ಉದ್ಘಾಟಿಸಿದರಲ್ಲದೆ, ಮಾಧ್ಯಮದ ಒಳನೋಟವನ್ನೊಳಗೊಂಡ ಈ ವಸ್ತು ಪ್ರದರ್ಶನವನ್ನು ಕುತೂಹಲದಿಂದ ವೀಕ್ಷಿಸಿದರು.

ರಾಜ್ಯ ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕ ಐವಾನ್ ಡಿಸೋಜ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್, ಜಂಟಿ ನಿರ್ದೇಶಕ ಎಂ. ರವಿಕುಮಾರ್ ಅವರೂ ಸೇರಿದಂತೆ ಹಿರಿಯ ಅಧಿಕಾರಿಗಳು ಹಾಜರಿದ್ದರು.

********

ಡಿ ಪಿ ಎಂ : ಟಿ ಸಿ ಎಂ ಬಿ

## ಪತ್ರಿಕಾ ಪ್ರಕಟಣೆ

## ರಾಜ್ಯ ಸಚಿವ ಸಂಪುಟ ಸಭೆ

**ಬೆಂಗಳೂರು, ಮಾರ್ಚ್ 22 (ಕರ್ನಾಟಕ ವಾರ್ತೆ) :**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಮಾರ್ಚ್ 24 ರಂದು ಶುಕ್ರವಾರ ಸಂಜೆ 4-00 ಗಂಟೆಗೆ ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಸಚಿವ ಸಂಪುಟ ಸಭಾ ಮಂದಿರದಲ್ಲಿ ರಾಜ್ಯ ಸಚಿವ ಸಂಪುಟ ಸಭೆಯು ನಡೆಯಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.